2011–12 ರಿಂದ 2013–14ನೇ ಸಾಲಿನಲ್ಲಿ ಎಸ್.ಎಫ್.ಸಿ. ಅನುದಾನದಲ್ಲಿ ಬಿಡುಗಡೆಯಾಗಿರುವ ಒಟ್ಟು ₹ 80.00 ಲಕ್ಷಗಳಿಗೆ ಕ್ರಿಯಾ ಯೋಜನೆ ತಯಾರಿಸಲಾಗಿದೆ.

ಅಲ್ಲದೆ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರ ನೇಮಕಾತಿಯಡಿ ಖಾಲಿಯಿರುವ ಹುದ್ದೆಗಳಲ್ಲಿ ಕೆಲವು ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆ ಸಹಮತಿ ನೀಡಿದ್ದು, ಖಾಲಿಯಿರುವ ಪೌರಕಾರ್ಮಿಕ ಹುದ್ದೆಗಳನ್ನು ಆದ್ಯತೆ ಮೇಲೆ ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

ಕಳಪೆ ಮಟ್ಟದ ಕಾಮಗಾರಿಗಳು

1868(1758); ಶ್ರೀ ಗುರುಪಾಟೀಲ್ ಶಿರವಾಳ (ಶಹಾಪುರ)

ಅ) ಯಾದಗಿರಿ ಜಿಲ್ಲೆಯ ಶಹಾಪೂರ ಮತಕ್ಷೇತ್ರದ ಸಿಂಧಗಿ ಕೊಡಂಗಲ ರಸ್ತೆಯ ಅಭಿವೃದ್ಧಿ ಕಾಮಗಾರಿಗೆ ಟೆಂಡರ್ ಆಗಿರುವ ಮೊತ್ತವೆಷ್ಟು;

ಆ) ಈ ರಸ್ತೆಯ ಕಾಮಗಾರಿಗೆ ಈಗಾಗಲೇ ಪಾವತಿಸಿರುವ ಬಿಲ್ ಮೊತ್ತವೆಷ್ಟು;

ಇ) ಈ ರಸ್ತೆಯ ಕಾಮಗಾರಿಯು ತುಂಬ ಕಳಪೆ ಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ರಸ್ತೆಯ ಗುಣಮಟ್ಟ ಕಾಪಾಡುವಲ್ಲಿ ಸರ್ಕಾರ ಕೈಗೊಂಡ ಕ್ರಮವೇನು?

ಡಾ॥ ಹೆಚ್.ಸಿ. ಮಹದೇವಪ್ಪ (ಲೋಕೋಪಯೋಗಿ ಸಚಿವರು)

ಅ) ₹ 1688.24 ಲಕ್ಷ

ಆ) ₹ 621.42 ಲಕ್ಷ

ಇ) ಸದರಿ ಕಾಮಗಾರಿಯು ಪ್ರಗತಿಯಲ್ಲಿದ್ದು, ಉತ್ತಮ ರೀತಿಯಲ್ಲಿ ಕಾಮಗಾರಿಯನ್ನು ನಿರ್ವಹಿಸಲಾಗುತ್ತಿದೆ

ಈ) ಯೋಜನಾ ಮೇಲು ಉಸ್ತುವಾರಿ ಸಮಾಲೋಚಕರು ಮತ್ತು ಇಲಾಖೆಯ ಇಂಜಿನಿಯರುಗಳು ಸೇರಿ ಗುಣಮಟ್ಟದ ಕಾಮಗಾರಿಯನ್ನು ಮಾಡಿಸುತ್ತಾರೆ ಹಾಗೂ ಕಾಲಕಾಲಕ್ಕೆ ಗುಣನಿಯಂತ್ರಣ ಪರೀಕ್ಷೆಗಳನ್ನು ಮಾಡಲಾಗುತ್ತಿದ್ದು, ಸಮರ್ಪಕವಾಗಿ ಕಾಮಗಾರಿಯನ್ನು ನಿರ್ವಹಿಸಿ ಪೂರ್ಣಗೊಳಿಸಲಾಗುವುದು.

ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದು

1871(413); ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ

ಅ) ಗದಗ ಜಿಲ್ಲೆಯಲ್ಲಿ ಇರತಕ್ಕಂತಹ ನಗರಸಭೆ ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ (ವಿವರ ನೀಡುವುದು);

ಆ) ಸಹಾಯಕ ಕಾರ್ಯನಿರ್ವಾಹಕ ಹಾಗೂ ಕಿರಿಯ ಅಭಿಯಂತರರ ಹುದ್ದೆಗಳು ಎಷ್ಟು ಖಾಲಿ ಇವೆ;

ಇ) ಅವನ್ನೆನಾದರೂ ಭರ್ತಿ ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ?

ಶ್ರೀ ಖಮರುಲ್ ಇಸ್ಲಾಂ (ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)

ಅ) ವಿವರಗಳನ್ನು ಅನುಬಂಧ–1ರಲ್ಲಿ ನೀಡಿದೆ.

ಆ) ವಿವರಗಳನ್ನು ಅನುಬಂಧ–1ರಲ್ಲಿ ನೀಡಿದೆ.